**All India Radio: Bangalore**
**Regional Bulletin In Kannada**
**10.11.2025 / 2.30 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**<><><><>**

**ಮುಖ್ಯಾಂಶಗಳು**

**೧. ಪರಪ್ಪನ ಅಗ್ರಹಾರ ಜೈಲಿನಲ್ಲಿ ಖೈದಿಗಳಿಗೆ ರಾಜಾತಿಥ್ಯ; ಇಬ್ಬರು ಅಧಿಕಾರಿಗಳನ್ನು ಅಮಾನತುಗೊಳಿಸಿದ ಸರ್ಕಾರ**

**೨. ಜೈಲಿನಲ್ಲಿ ಭಯೋತ್ಪಾದಕರ ಐಷಾರಾಮಿ ಜೀವನ; ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಕಳವಳ**

**೩. ಮುಖ್ಯಮಂತ್ರಿ ನಿವಾಸಕ್ಕೆ ಬಿಜೆಪಿಯಿಂದ ಮುತ್ತಿಗೆ ಯತ್ನ; ಜೈಲು ಅಧಿಕಾರಿಗಳ ನಡೆಗೆ ಆಕ್ಷೇಪ**

**೪. ಶಿಕ್ಷಣ ಸೂಚ್ಯಂಕದಲ್ಲಿ ಏಳರಿಂದ ೧೪ಕ್ಕೆ ಕುಸಿದ ಮೈಸೂರು; ಕೆಡಿಪಿ ಸಭೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅಸಮಾಧಾನ**

**<><><><>**

ಪರಪ್ಪನ ಅಗ್ರಹಾರ ಜೈಲಿನಲ್ಲಿ ಕೈದಿಗಳಿಗೆ ರಾಜಾತಿಥ್ಯ ನೀಡಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಇಬ್ಬರು ಅಧಿಕಾರಿಗಳನ್ನು ಸರ್ಕಾರ ಅಮಾನತು ಮಾಡಿದೆ. ಓರ್ವ ಅಧಿಕಾರಿಯನ್ನು ವರ್ಗಾವಣೆ ಮಾಡಲಾಗಿದೆ. ಜೈಲಿನ ಅಧೀಕ್ಷಕ ಮ್ಯಾಗೇರಿ ಹಾಗೂ ಉಪ ಅಧೀಕ್ಷಕ ಅಶೋಕ್ ಬಜಂತ್ರಿ ಅಮಾನತ್ತುಗೊಂಡ ಅಧಿಕಾರಿಗಳಾಗಿದ್ದಾರೆ. ಪರಪ್ಪನ ಅಗ್ರಹಾರ ಜೈಲಿನ ಮುಖ್ಯ ಅಧೀಕ್ಷಕ ಸುರೇಶ್ ಅವರನ್ನು ವರ್ಗಾವಣೆ ಮಾಡಲಾಗಿದೆ. ಇಂದು ಗೃಹ ಸಚಿವ ಡಾ. ಜಿ.ಪರಮೇಶ್ವರ್ ನೇತೃತ್ವದಲ್ಲಿ ಜೈಲು ಅಧಿಕಾರಿಗಳು, ಪೊಲೀಸ್ ಅಧಿಕಾರಿಗಳ ಜೊತೆ ನಡೆದ ಸಭೆಯಲ್ಲಿ ಈ ನಿರ್ಧಾರ ಕೈಗೊಳ್ಳಲಾಗಿದೆ. ಕೈದಿಗಳಿಗೆ ರಾಜಾತಿಥ್ಯ ಪ್ರಕರಣದ ವಿಡಿಯೋ ವೈರಲ್ ಪ್ರಕರಣಕ್ಕೆ ಸಂಬಂಧಿಸಿದಂತೆ ತನಿಖೆಗೆ ಉನ್ನತ ಮಟ್ಟದ ಸಮಿತಿ ರಚನೆ ಮಾಡಲಾಗಿದೆ. ಕಾನೂನು ವ್ಯವಸ್ಥೆ ವಿಭಾಗದ ಎಡಿಜಿಪಿ ಆರ್.ಹಿತೇಂದ್ರ, ಸಂದೀಪ್ ಪಾಟೀಲ್, ಅಮರನಾಥ ರೆಡ್ಡಿ, ರಿಷ್ಯಂತ್ ಅವರನ್ನು ಒಳಗೊಂಡ ನಾಲ್ವರು ಅಧಿಕಾರಿಗಳ ಸಮಿತಿ ರಚಿಸಲಾಗಿದೆ. ತನಿಖೆ ಬಳಿಕ ವರದಿ ನೀಡುವಂತೆ ಸೂಚಿಸಲಾಗಿದೆ. ಸಭೆಯಲ್ಲಿ ೫ ವರ್ಷಗಳ ನಂತರ ಜೈಲು ಅಧಿಕಾರಿಗಳ ವರ್ಗಾವಣೆ ಕಡ್ಡಾಯ ಎಂದು ಗೃಹ ಸಚಿವ ಪರಮೇಶ್ವರ್ ತಿಳಿಸಿದ್ದಾರೆ. ಸಭೆಗೂ ಮೊದಲು ಸುದ್ದಿಗಾರರೊಂದಿಗೆ

ಮಾತನಾಡಿದ ಗೃಹಸಚಿವರು, ಅಪರಾಧಿಗಳು ಜೈಲಿನಲ್ಲಿ ಮೊಬೈಲ್ ಬಳಸಿದರೆ, ಅಧಿಕಾರಿಗಳನ್ನೇ ಹೊಣೆಗಾರರನ್ನಾಗಿ ಮಾಡಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ.

**ಧ್ವನಿ: ಡಾ.ಜಿ. ಪರಮೇಶ್ವರ್, ಗೃಹಸಚಿವ ( ಸೆಕೆಂಡ್ಸ್)**

**<><><><>**

ಪರಪ್ಪನ ಅಗ್ರಹಾರ ಜೈಲಿನಲ್ಲಿ ಭಯೋತ್ಪಾದಕರಿಗೆ ಹಾಗೂ ಅಪರಾಧಿಗಳಿಗೆ ರಾಜಾತಿಥ್ಯ ಸಿಗುತ್ತಿರುವ ಬಗ್ಗೆ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ವಿಷಯಕ್ಕೆ ಸಂಬಂಧಪಟ್ಟಂತೆ ಈ ಹಿಂದೆಯೇ ಅಧಿಕಾರಿಗಳು ಪರಸ್ಪರ ಆರೋಪ-ಪ್ರತ್ಯಾರೋಪ ಮಾಡಿದ್ದರು. ನ್ಯಾಯಾಲಯವು, ಸಿಬ್ಬಂದಿಗೆ ಕಠಿಣ ಎಚ್ಚರಿಕೆ ನೀಡಿತ್ತು. ಆದರೂ ಇಂತಹ ಪ್ರಕರಣಗಳು ಮರುಕಳಿಸುತ್ತಿರುವ ಬಗ್ಗೆ ಕುಮಾರಸ್ವಾಮಿ ಕಳವಳ ವ್ಯಕ್ತಪಡಿಸಿದ್ದಾರೆ. ಜೈಲು ನಿರ್ವಹಣೆಯಲ್ಲಿ ರಾಜ್ಯ ಸರ್ಕಾರದ ವೈಫಲ್ಯದ ಬಗ್ಗೆ ಮುಖ್ಯಮಂತ್ರಿ ಹಾಗೂ ಗೃಹ ಸಚಿವರನ್ನೇ ಪ್ರಶ್ನಿಸುವಂತೆ ತಿಳಿಸಿದ್ದಾರೆ.

**ಧ್ವನಿ: ಎಚ್.ಡಿ. ಕುಮಾರಸ್ವಾಮಿ ( ಸೆಕೆಂಡ್ಸ್)**

**<><><><>**

ಪರಪ್ಪನ ಅಗ್ರಹಾರ ಜೈಲಿನಲ್ಲಿ ಖೈದಿಗಳಿಗೆ ರಾಜಾತಿಥ್ಯ ನೀಡುತ್ತಿರುವ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ರಾಜೀನಾಮೆ ನೀಡುವಂತೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಒತ್ತಾಯಿಸಿದ್ದಾರೆ. ಇದನ್ನು ಖಂಡಿಸಿ, ಬೆಂಗಳೂರಿನಲ್ಲಿ ಬಿಜೆಪಿ ಯುವ ಮೋರ್ಚಾ ವತಿಯಿಂದ ಮುಖ್ಯಮಂತ್ರಿ ನಿವಾಸಕ್ಕೆ ಮುತ್ತಿಗೆ ಯತ್ನ ನಡೆಯಿತು. ಬಳಿಕ ಮಾತನಾಡಿದ ಬಿ.ವೈ.ವಿಜಯೇಂದ್ರ, ಪರಪ್ಪನ ಅಗ್ರಹಾರ ಜೈಲು, ಭಯೋತ್ಪಾದಕರು ಹಾಗೂ ಅಪರಾಧಿಗಳಿಗೆ ಮನರಂಜನಾ ಕ್ಲಬ್ ಆಗಿದೆ ಎಂದು ದೂರಿದ್ದಾರೆ. ದೇಶ ದ್ರೋಹಿಗಳಿಗೆ ಟಿವಿ, ಮೊಬೈಲ್ ಸಂಪರ್ಕ ಸಿಗುತ್ತಿರುವುದಕ್ಕೆ ಆಕ್ಷೇಪ ವ್ಯಕ್ತಪಡಿಸಿದ್ದಾರೆ. ರಾಜ್ಯದಲ್ಲಿಯೂ ಭ್ರಷ್ಟಾಚಾರ ಹೆಚ್ಚಿದ್ದು, ಜೈಲಿನ ವ್ಯವಸ್ಥೆಯು ಭ್ರಷ್ಟಾಚಾರದಲ್ಲಿ ಮುಳುಗಿ ಹೋಗಿದೆ ಎಂದು ಆರೋಪಿಸಿದ್ದಾರೆ.

**<><><><>**

ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ದಿನದಿಂದ ದಿನಕ್ಕೆ ಹದಗೆಡುತಿದ್ದು, ರಾಜ್ಯ ಸರ್ಕಾರ ಈ ವಿಚಾರವನ್ನು ಗಂಭೀರವಾಗಿ ಪರಿಗಣಿಸಿ ಸೂಕ್ತ ರೀತಿಯಲ್ಲಿ ಕ್ರಮಕೈಗೊಳ್ಳಬೇಕು ಎಂದು ಉಡುಪಿ-ಚಿಕ್ಕಮಗಳೂರು ಸಂಸದ ಕೋಟಾ ಶ್ರೀನಿವಾಸ ಪೂಜಾರಿ ಆಗ್ರಹಿಸಿದ್ದಾರೆ. ಚಿಕ್ಕಮಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬೆಂಗಳೂರಿನ ಪರಪ್ಪನ ಆಗ್ರಹಾರದಲ್ಲಿ ಖೈದಿಗಳು

ಮೊಬೈಲ್, ಟಿ.ವಿ ಬಳಸುವುದು, ಆತಂಕಕಾರಿ ವಿಚಾರ ಎಂದು ತಿಳಿಸಿದ್ದಾರೆ. ರಾಜ್ಯದ ಗೃಹ ಇಲಾಖೆ ಸಂಪೂರ್ಣ ವಿಫಲಾವಾಗಿದೆ. ಕೂಡಲೆ ಮುಖ್ಯಮಂತ್ರಿಗಳು, ಗೃಹ ಸಚಿವರು ಅಧಿಕಾರಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿದ್ದಾರೆ.

<><><>

ಜನರನ್ನು ಕಚೇರಿಗಳಿಗೆ ಅಲೆದಾಡಿಸುವುದನ್ನು ಯಾವುದೇ ಕಾರಣಕ್ಕೂ ಸಹಿಸುವುದಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದ್ದಾರೆ. ಮೈಸೂರಿನಲ್ಲಿಂದು ನಡೆದ ಕೆಡಿಪಿ ಸಭೆಯಲ್ಲಿ ಅಧಿಕಾರಿಗಳು ಜಿಲ್ಲಾ ಮಟ್ಟದಲ್ಲೇ ಇರಬೇಕು ಎಂದು ಈಗಾಗಲೇ ಸೂಚನೆ ನೀಡಿದ್ದು, ಇದನ್ನು ಪಾಲಿಸದ ಅಧಿಕಾರಿಗಳ ವಿರುದ್ಧ ವರದಿ ನೀಡಲು ಜಿಲ್ಲಾಧಿಕಾರಿಗೆ ಸೂಚನೆ ನೀಡಿದ್ದಾರೆ. ಇದೇ ವೇಳೆ, ಶಿಕ್ಷಣ ಸೂಚ್ಯಂಕದಲ್ಲಿ ಮೈಸೂರು ಜಿಲ್ಲೆ ಏಳನೇ ಸ್ಥಾನದಿಂದ ೧೪ನೇ ಸ್ಥಾನಕ್ಕೆ ಕುಸಿದಿರುವುದಕ್ಕೆ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಮೈಸೂರು ಅಭಿವೃದ್ಧಿಯ ವೇಗ ಹೆಚ್ಚಾಗಬೇಕು. ನಿಗದಿತ ಅವಧಿಯೊಳಗೆ ಕೆಲಸಗಳು ಪೂರ್ಣಗೊಳ್ಳಬೇಕು. ಆದರೆ, ಸಮಾಧಾನಕರವಾಗಿ ಅಭಿವೃದ್ಧಿ ಕಾರ್ಯಗಳು ವೇಗ ಪಡೆದುಕೊಂಡಿಲ್ಲ ಎಂದು ಅಧಿಕಾರಿಗಳ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಹಾಸ್ಟೆಲ್‌ಗಳಲ್ಲಿ ಊಟದ ವ್ಯವಸ್ಥೆಯನ್ನು ಪರಿಶೀಲಿಸಬೇಕು ಎಂದು ನಿರ್ದೇಶನ ನೀಡಿದ್ದಾರೆ. ಇದೇ ವೇಳೆ, ಮೈಸೂರು ಐತಿಹಾಸಿಕ ದಸರಾ ಹಬ್ಬವನ್ನು ಯಶಸ್ವಿಗೊಳಿಸಿದ್ದಕ್ಕೆ ಅಧಿಕಾರಿಗಳು ಹಾಗೂ ಸಿಬ್ಬಂದಿಯನ್ನು ಅಭಿನಂದಿಸಿದರು.

<><><>

ಕೋಲಾರ ಜಿಲ್ಲೆಯ ವ್ಯಾಪ್ತಿಯಲ್ಲಿ ಡಿಸೆಂಬರ್ ೧ ರಿಂದ ದ್ವಿಚಕ್ರವಾಹನ ಸವಾರರು ಹೆಲ್ಮೆಟ್ ಕಡ್ಡಾಯವಾಗಿ ಧರಿಸಬೇಕು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ನಿಖಿಲ್ ಸೂಚಿಸಿದ್ದಾರೆ. ಕೋಲಾರದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಿಯಮ ಪಾಲನೆ ಮಾಡದವರಿಗೆ ದಂಡ ವಿಧಿಸಲಾಗುವುದು. ಪತ್ರಕರ್ತರು, ವಕೀಲರು, ವೈದ್ಯರು, ರಾಜಕೀಯ ಕಾರ್ಯಕರ್ತರು ಸೇರಿದಂತೆ ಯಾರಿಗೂ ಹೆಲ್ಮೆಟ್ ನಿಂದ ವಿನಾಯಿತಿ ಇಲ್ಲ ಎಂದು ಎಚ್ಚರಿಕೆ ನೀಡಿದ್ದಾರೆ. ಬೈಕ್ ವೀಲಿಂಗ್, ಸೈಲೆನ್ಸರ್ ಬದಲಾವಣೆ, ಗಡಿಭಾಗಗಳಲ್ಲಿ ರಾತ್ರಿ ಅಕ್ರಮ ಚಾಲನೆ ಇಂತಹ ಎಲ್ಲ ಉಲ್ಲಂಘನೆಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು. ಮನೆಮನೆ ಪೊಲೀಸ್ ಭೇಟಿ ಕಾರ್ಯಕ್ರಮ ಜಿಲ್ಲೆಯಲ್ಲಿ ಪ್ರಸ್ತುತ ಶೇಕಡ ೪೮ ರಷ್ಟಿದೆ. ಡಿಸೆಂಬರ್ ಒಳಗೆ ಶೇಕಡ ೧೦೦ ರಷ್ಟು ಗುರಿ ಸಾಧಿಸಲಾಗುವುದು ಎಂದು ತಿಳಿಸಿದ್ದಾರೆ.

<><><>

ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ೨೦೨೫-೨೬ ನೇ ಸಾಲಿನ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ವತಿಯಿಂದ ೫ ಫಲಾನುಭವಿ ಆಧಾರಿತ ಯೋಜನೆಗಳಿಗೆ ಇದೇ ೧೫ ರೊಳಗೆ ಅಗತ್ಯ ದಾಖಲಾತಿಗಳೊಂದಿಗೆ ಅರ್ಜಿ ಸಲ್ಲಿಸಬಹುದಾಗಿದೆ.

ವಿಶೇಷಚೇತನ ವ್ಯಕ್ತಿಯೊಂದಿಗೆ ವಿವಾಹ ಮಾಡಿಕೊಳ್ಳುವರಿಗೆ ವಿವಾಹ ಪ್ರೋತ್ಸಾಹಧನ ಯೋಜನೆ, ಎಸ್.ಎಸ್.ಎಲ್.ಸಿ ನಂತರ ವಿದ್ಯಾರ್ಥಿಗಳಿಗೆ ಶುಲ್ಕ ಮರುಪಾವತಿ ಯೋಜನೆ, ಬುದ್ಧಿಮಾಂದ್ಯತೆ, ಆಟಿಸಂ ಗೆ ಒಳಗಾದ ಬಡತನ ರೇಖೆಗಿಂತ ಕೆಳಗಿರುವ ಕುಟುಂಬದವರಿಗೆ ನಿರಾಮಯ ಆರೋಗ್ಯ ವಿಮಾ ಯೋಜನೆ, ೭ ಬಗೆಯ ವಿಕಲಚೇತನರ ಆರೈಕೆದಾರರ ಪ್ರೋತ್ಸಾಹಧನ ಯೋಜನೆಗಳಿಗೆ ಅರ್ಜಿ ಸಲ್ಲಿಸಬಹುದು ಎಂದು ಜಿಲ್ಲಾ ಅಂಗವಿಕಲ ಕಲ್ಯಾಣಾಧಿಕಾರಿ ಸತೀಶ್ ಪಾಣಿ  ತಿಳಿಸಿದ್ದಾರೆ.

**<><><><>**

ಬೆಂಗಳೂರಿನ ರಕ್ಷಣಾ ಲೆಕ್ಕಪತ್ರಗಳ ಪ್ರಧಾನ ನಿಯಂತ್ರಕರು ಇದೇ ೧೨ ರಂದು ಬೆಂಗಳೂರಿನಲ್ಲಿ ಸ್ಪರ್ಶ್ ಜನಸಂಪರ್ಕ ಕಾರ್ಯಕ್ರಮ ನಡೆಸಲಿದ್ದಾರೆ. ಪಿಂಚಣಿದಾರರ ಕುಂದುಕೊರತೆಗಳನ್ನು ಪರಿಹರಿಸಲು ಈ ವಿಶೇಷ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.ಕಾರ್ಯಕ್ರಮದ ಸಮಯದಲ್ಲಿ ಡಿಜಿಟಲ್ ಲೈಫ್ ಸರ್ಟಿಫಿಕೇಟ್ ಅಭಿಯಾನ ನಡೆಸಲಾಗುತ್ತದೆ. ಸ್ಪರ್ಶ್ ಮತ್ತು ಪಿಂಚಣಿಗೆ ಸಂಬಂಧಿಸಿದ ಎಲ್ಲಾ ಪ್ರಶ್ನೆಗಳಿಗೆ ಸ್ಥಳದಲ್ಲೇ ಸಹಾಯ, ಮಾರ್ಗದರ್ಶನ ಮತ್ತು ಬೆಂಬಲವನ್ನು ಒದಗಿಸಲು ಸಮರ್ಪಿತ ತಂಡ ಲಭ್ಯವಿರಲಿದೆ.

**<><><><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><><><>**

**<><><><> ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ<><><><>**